## ಪ್ರಧಾನ ನ್ಯಾಯಾದೀಶರ ನ್ಯಾಯಾಲಯ ಮತ್ತು ಜೆ.ಎಂ.ಎಫ್.ಸಿ, ಕುಂದಾಪುರ

ಸಿಸಿ ನಂಬ್ರಃ 164/2024
ಸಿಡಬ್ಲ್ಯೂ- 7
ಪಿಡಬ್ಲ್ಯೂ- 8

| | | |
|---|---|---|
| ಸಾಕ್ಷಿದಾರರ ಹೆಸರು | : | ರಾಜೇಶ ಗಾಣಿಗ |
| ತಂದೆಯ ಹೆಸರು | : | ಕೃಷ್ಣ ಗಾಣಿಗ |
| ಪ್ರಾಯ | : | 32 ವರ್ಷ |
| ಉದ್ಯೋಗ | : | ಮ್ಯಾನೇಜರ್ |
| ವಾಸ | : | ನೇರಳಕಟ್ಟೆ |

ದಿನಾಂಕಃ **18- 02-2025** ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೊಧಿಸಲಾಯಿತು

ಮುಖ್ಯ ವಿಚಾರಣೆಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದ

ನನಗೆ ಆರೋಪಿತನ ಪರಿಚಯ ಇರುವುದಿಲ್ಲ. ನನಗೆ ಪ್ರಕರಣದ ಬಗ್ಗೆ ಏನು ಮಾಹಿತಿ ಇರುವುದಿಲ್ಲ. ಪೊಲೀಸರು ಒಂದು ಬಾರಿ ಮನೆಯ ಬಳಿ ಬಂದಿದ್ದು ಬ್ಯಾಟರಿ ಕೇಸ್‌ನ ವಿಚಾರವಾಗಿ ಸಹಿ ಮಾಡಿರುತ್ತೇನೆ. ಬೇರೆ ಮಾಹಿತಿ ಇರುವುದಿಲ್ಲ.

(ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಗೆ ವಿರುದ್ಧವಾಗಿ ಸಾಕ್ಷಿ ನುಡಿದಿದ್ದರಿಂದ ಮಾನ್ಯ ಸ.ಸ.ಅ.ರವರು ಸಂಪೂರ್ಣ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು.)

ಪಾಟೀ ಸವಾಲುಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದ

ನಾನು ಬಿ ಕಾಂ ಓದಿರುತ್ತೇನೆ. ಬಿ ಬಿ ಹೆಗ್ಡೆ ಕಾಲೇಜಿನಲ್ಲಿ ಓದಿರುತ್ತೇನೆ. 3 ವರ್ಷಗಳ ಹಿಂದೆ ನಾನು ಕ್ಯಾಟರಿಂಗ್ ಹೋಗುತ್ತಿದ್ದೆ. ನಮ್ಮ ಸುತ್ತ ಮುತ್ತ ಊರಿನ ಕಡೆ ಕೆಲಸ ಮಾಡುತ್ತಿದ್ದೆ. ಕ್ಯಾಟರಿಂಗ್ ಮಾಡುವಾಗ ಅವರೇ ನಮ್ಮನ್ನು ಕರೆದುಕೊಂಡು ಹೋಗಿ ಕರೆದುಕೊಂಡು ಬಂದು ಬಿಡುತ್ತಿದ್ದರು. ನಮ್ಮ ಮನೆ ನೇರಳಕಟ್ಟೆಯಲ್ಲಿದೆ. ಕೊಡ್ಲಾಡಿ ನಮ್ಮ ಮನೆಯಿಂದ ತುಂಬಾ ದೂರ ಇರುತ್ತದೆ. ನಾನು ಕೆಲಸ ಮಾಡಿಕೊಂಡು ಹೋಗುವಾಗ ರಸ್ತೆಯಲ್ಲಿ ಸೋಲಾರ್ ಬ್ಯಾಟರಿ ನೋಡಿರುವುದಿಲ್ಲ.

ನಾನು ಕ್ಯಾಟರಿಂಗ್ ಕೆಲಸ ಮುಗಿಸಿ ಮನೆಗೆ ಹೋಗುವಾಗ ಆಜ್ರಿ ಹಾಗೂ ನೇರಳಕಟ್ಟೆ ರಸ್ತೆಯ ಮೋರಿಯ ಕೆಳಗೆ ಬ್ಯಾಟರಿ ಬಿದ್ದಿತ್ತು ಎಂದರೆ ಸಾಕ್ಷಿ ಗೊತ್ತಿಲ್ಲ ಎಂದು ನುಡಿಯುತ್ತಾರೆ. ಆ ಬ್ಯಾಟರಿಯನ್ನು ಪ್ರಕಾಶ್ ರವರು ತೆಗೆದುಕೊಂಡು ಹೋಗಿದ್ದರು ಎಂದರೆ ಸಾಕ್ಷಿ ಗೊತ್ತಿಲ್ಲ ಎಂದು

ನುಡಿಯುತ್ತಾರೆ. ನಾನು ಕಳ್ಳತನ ವಿಚಾರವನ್ನು ಮರುದಿನ ಬೆಳಿಗ್ಗೆ ಪತ್ರಿಕೆಯಲ್ಲಿ ನೋಡಿದ್ದೇನೆ ಎಂದರೆ ಸರಿಯಲ್ಲ. ತದನಂತರ ನನಗೆ ಕಳ್ಳತನ ವಿಚಾರ ಗೊತ್ತಾಗಿ,ಆರೋಪಿತ ಕಳ್ಳತನ ಮಾಡಿದ್ದಾನೆ ಎಂದು ಗೊತ್ತಾಯಿತು ಎಂದರೆ ಸರಿಯಲ್ಲ. ನಿಪಿ.11 ರಂತೆ ಪೊಲೀಸರಿಗೆ ಹೇಳಿಕೆ ಕೊಟ್ಟಿದ್ದೇನೆ ಎಂದರೆ ಸರಿಯಲ್ಲ. ಈ ಎಲ್ಲಾ ವಿಚಾರಗಳು ನಿಜವಿದ್ದರೂ ಆರೋಪಿತನಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

(ಆರೋಪಿತರ ಪರ ವಕೀಲರು ಪಾಟಿ ಸವಾಲು ಇಲ್ಲ ಎಂದು ತಿಳಿಸಿದ ಮೇರೆಗೆ ಪಾಟಿ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.)

ಮರು ವಿಚಾರಣೆಃ ಇಲ್ಲ

ಓದಿ ಹೇ. ಕೇ. ಸರಿ ಇದೆ.

ನನ್ನ ಹೇ. ಮೇ. ಬೆ. ಮಾಡಲಾಗಿದೆ

ಪ್ರಧಾನ ಸಿವಿಲ್ ನ್ಯಾಯಾದೀಶರು
ಮತ್ತು ಜೆ.ಎಂ.ಎಫ್.ಸಿ. ಕುಂದಾಪುರ